ಕೆಪಿಸಿಸಿ ಉಪಾಧ್ಯಕ್ಷ ಪ್ರೊ.ಬಿ.ಕೆ.ಚಂದ್ರಶೇಖರ್ ಪ್ರತಿಪಾದನೆ - ಪ್ರಜಾವಾಣಿ - 14/04/2016

# ಮೂಲಸೌಕರ್ಯಕ್ಕೆ ಕೇಂದ್ರದ ಮೇಲೆ ಒತ್ತಡ ತನ್ನಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಕೃಷಿ ಅಭಿವೃದ್ಧಿ ದೃಷ್ಟಿಯಿಂದ ಗ್ರಾಮೀಣ ಪ್ರದೇಶಗಳ ಮೂಲ ಸೌಕರ್ಯಗಳಿಗಾಗಿ ಪಕ್ಷಾತೀತವಾಗಿ ಎಲ್ಲರೂ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಬೇಕು' ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಉಪಾಧ್ಯಕ್ಷ ಪ್ರೊ.ಬಿ.ಕೆ.ಚಂದ್ರಶೇಖರ್ ಪ್ರತಿಪಾದಿಸಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯ, ಅದರ ಹಿರಿಯ ವಿದ್ಯಾರ್ಥಿಗಳ ಸಂಘ, ಕರ್ನಾಟಕ ಕೃಷಿ ಬೆಲೆ ಆಯೋಗ ಮತ್ತು ಭಾರತೀಯ ವಿಸ್ತರಣಾ ಶಿಕ್ಷಣ ಸಂಘದ ಆಶ್ರಯದಲ್ಲಿ ನಗರದಲ್ಲಿ ಬುಧವಾರ ಆಯೋಜಿಸಿದ್ದ 'ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಸುಸ್ಥಿರ ಮಾರುಕಟ್ಟೆ ಹಾಗೂ ಲಾಭದಾಯಕ ಬೆಲೆ' ಕುರಿತ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

'ರಸ್ತೆ, ಉಗ್ರಾಣ, ಶೈತ್ಯಲೀಕರಣ ಘಟಕ, ಸಾರಿಗೆ, ವಿದ್ಯುತ್ ಇತರ ಮೂಲಸೌಕರ್ಯಗಳು ವ್ಯವಸ್ಥಿತವಾಗಿದ್ದರೆ ಮಾತ್ರ ರೈತರ ಏಳಿಗೆ ಸಾಧ್ಯ. ಒಂದೊಮ್ಮೆ ಕೇಂದ್ರ ಸರ್ಕಾರ ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡದಿದ್ದರೆ 50 ವರ್ಷಗಳಾದರೂ ಕೃಷಿಕರ ಅಭಿವೃದ್ಧಿಯಾಗುವುದಿಲ್ಲ' ಎಂದು ಅಭಿಪ್ರಾಯಪಟ್ಟರು.



ಸಮಾಲೋಚನಾ ಸಭೆಯಲ್ಲಿ (ಎಡದಿಂದ) ಎಂ.ಮಹದೇವಪ್ಪ, ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಎಚ್.ಶಿವಣ್ಣ, ಪ್ರಕಾಶ್ ಕಮ್ಮರಡಿ ಮತ್ತು ಪ್ರೊ.ಬಿ.ಕೆ.ಚಂದ್ರಶೇಖರ್ ಚಿತ್ರದಲ್ಲಿದ್ದಾರೆ ಪ್ರಜಾವಾಣಿ ಚಿತ್ರ

ಮಾಜಿ ಶಾಸಕ ಡಿ.ಆರ್.ಪಾಟೀಲ ಮಾತನಾಡಿ, 'ಉತ್ಪಾದನಾ ವೆಚ್ಚದ ಮೇಲೆ ಶೇ 50ರಷ್ಟು ಲಾಭಾಂಶ ಇರುವಂತೆ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿ ಮಾಡಬೇಕು ಎಂಬ ಕೃಷಿ ವಿಜ್ಞಾನಿ ಎಂ.ಎಸ್.ಸ್ವಾಮಿನಾಥನ್ ಅವರ ವರದಿಯ ಶಿಫಾರಸುಗಳನ್ನು ಈಡೇರಿಸುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಬೇಕು' ಎಂದು ತಿಳಿಸಿದರು.

ಶಾಸಕ ಸಿದ್ದು ನ್ಯಾಮೇಗೌಡ ಮಾತನಾಡಿ, 'ದೇಶದಲ್ಲಿ ಇಥೆನಾಲ್ ಚಿಲ್ಲರೆ ಮಾರಾಟಕ್ಕೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ಕಾನೂನು ತರಬೇಕು. ಇದರಿಂದ ಕಬ್ಬಿಗೆ ಉತ್ತಮ ಬೆಲೆ ದೊರೆಯಲಿದೆ. ಈ ವಿಚಾರದಲ್ಲಿ ಕೃಷಿ ವಿಶ್ವವಿದ್ಯಾಲಯಗಳು ಕೇಂದ್ರದ ಮೇಲೆ ಒತ್ತಡ ಹಾಕಬೇಕು' ಎಂದರು.

ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಮಾತನಾಡಿ, 'ಕಾರ್ಪೊರೇಟ್ ಕುಳಗಳ ಸಾಲದ ಮೇಲಿನ ಲಕ್ಷಾಂತರ ಕೋಟಿ ಬಡ್ಡಿ ಮನ್ನಾ ಮಾಡುವ ಸರ್ಕಾರಗಳು, ಕೃಷಿ ಉತ್ಪಾದನೆ ಉತ್ತೇಜನಾ ಕಾರ್ಯಕ್ರಮಗಳಿಗಾಗಿ ಸಾವಿರ ಕೋಟಿ ಅನುದಾನ ಮೀಸಲಿಡುತ್ತವೆ. ರೈತನಿಗಾಗಿ ಏನು ಮಾಡುತ್ತಿಲ್ಲ. ಹೀಗಾಗಿ ರೈತರ ಸಾವಿಗೆ ಸರ್ಕಾರಗಳನ್ನೇ ನೇರ ಹೊಣೆ ಮಾಡಬೇಕು' ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತ ಮುಖಂಡರಾದ ಸುನಂದಾ ಜಯರಾಮ್ ಮಾತನಾಡಿ, 'ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗುವಂತಾಗಬೇಕು. ನಾವು ಬೆಳೆದ ಬೆಳೆಗೆ ನಾವೇ ಬೆಲೆ ನಿರ್ಧರಿಸುವಂತಾಗಬೇಕು. ಉತ್ಪಾದನಾ ವೆಚ್ಚದ ಮೇಲೆ ಶೇ 30ರಷ್ಟಾದರೂ ಲಾಭಾಂಶ ಇರುವಂತೆ ಬೆಲೆ ನಿಗದಿಪಡಿಸಬೇಕು. ಲಾಭದಾಯಕ ಬೆಲೆಯ ಹಕ್ಕಿನ ಕಾಯ್ದೆ ಜಾರಿಗೆ ತರಬೇಕು' ಎಂದು ತಿಳಿಸಿದರು.

ವಿಶ್ವವಿದ್ಯಾಲಯಗಳ ನಿವೃತ್ತ ಕುಲಪತಿಗಳ ವೇದಿಕೆ ಅಧ್ಯಕ್ಷ ಎಂ.ಮಹದೇವಪ್ಪ ಮಾತನಾಡಿ, 'ಕೃಷಿಯಲ್ಲಿ ತಂತ್ರಜ್ಞಾನ ಅಳವಡಿಕೆ ಮಾಡಿಕೊಳ್ಳುವಲ್ಲಿ ನಾವು ಹಿಂದೆ ಇದ್ದೇವೆ. ಈ ಕುರಿತು ಅರಿವು ಮೂಡಿಸುವ ಕೆಲಸಗಳಾಗಬೇಕು. ರೈತರಿಗೆ ಸಂಬಂಧಿತ ಯೋಜನೆಗಳು ಹೆಚ್ಚಬೇಕು. ಪ್ರಾಥಮಿಕ ಹಂತದಲ್ಲಿಯೇ ಕೃಷಿ ಕುರಿತು ಮಕ್ಕಳು ಓದುವಂತಾಗಬೇಕು' ಹೇಳಿದರು.

## ಕೇಂದ್ರ ಧಾರಾಳತನ ತೋರಲಿ

'ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನಿಗದಿ ಮಾಡುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಹೀಗಾಗಿ ಅದು ಆ ವಿಚಾರದಲ್ಲಿ ಧಾರಾಳತನ ತೋರಿಸಬೇಕು. ಅದನ್ನು ರಾಜ್ಯ ಸರ್ಕಾರ ಸರಿಯಾಗಿ ಅನುಷ್ಠಾನಕ್ಕೆ ತರಲು ಖರೀದಿ ವ್ಯವಸ್ಥೆ ಮಾಡಬೇಕು' ಎಂದು ಕೃಷಿ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ಹೇಳಿದರು.

'ಆಯೋಗದ ವತಿಯಿಂದ 17 ಕೃಷಿ ಉತ್ಪನ್ನಗಳಿಗೆ ಉತ್ಪಾದನಾ ವೆಚ್ಚದ ಲೆಕ್ಕಾಚಾರ ಹಾಕಿದ್ದೇವೆ. ಅದರ ಪ್ರಕಾರ ವೆಚ್ಚಕ್ಕಿಂತಲೂ ಕೇಂದ್ರ ಸರ್ಕಾರ ಘೋಷಿಸಿರುವ ಬೆಂಬಲ ಬೆಲೆ ಕಡಿಮೆ ಇದೆ. ಉತ್ಪಾದನಾ ವೆಚ್ಚ ತಗ್ಗಿಸಿದರೆ ಕೃಷಿ ಲಾಭದಾಯಕವಾಗಲಿದೆ. ಅದಕ್ಕಾಗಿ ಯಾಂತ್ರೀಕರಣವನ್ನು ಪ್ರೋತ್ಸಾಹಿಸುವ ಕೆಲಸಗಳಾಗಬೇಕು' ಎಂದರು.